# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಪಿಎಆರ್ 64 ಎಸ್‌ಎಲ್‌ಎ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ
ಬೆಂಗಳೂರು, ದಿನಾಂಕ:16-07-2020.

## ಅಧಿಸೂಚನೆ

ಭಾರತ ಸಂವಿಧಾನದ 318ನೇ ಅನುಚ್ಛೇದದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕದ ರಾಜ್ಯಪಾಲರು, ಕರ್ನಾಟಕ ಲೋಕ ಸೇವಾ ಆಯೋಗ (ಸೇವಾ ಷರತ್ತುಗಳು) ವಿನಿಯಮಗಳು, 1957ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಮೂಲಕ ಕೆಳಕಂಡ ವಿನಿಯಮಗಳನ್ನು ರಚಿಸಿದ್ದಾರೆ, ಎಂದರೆ:-

## ವಿನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ವಿನಿಯಮಗಳನ್ನು, ಕರ್ನಾಟಕ ಲೋಕ ಸೇವಾ ಆಯೋಗ (ಸೇವಾ ಷರತ್ತುಗಳು) (ತಿದ್ದುಪಡಿ) ವಿನಿಯಮಗಳು, 2021 ಎಂದು ಕರೆಯತಕ್ಕದ್ದು.

(2) ಈ ವಿನಿಯಮಗಳು, ಅಧಿಕೃತ ರಾಜ್ಯಪತ್ರದಲ್ಲಿ ಅವುಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. 4ನೇ ವಿನಿಯಮದ ತಿದ್ದುಪಡಿ:-** ಕರ್ನಾಟಕ ಲೋಕ ಸೇವಾ ಆಯೋಗ (ಸೇವಾ ಷರತ್ತುಗಳು) ವಿನಿಯಮಗಳು, 1957ರಲ್ಲಿ 4ನೇ ವಿನಿಯಮದ, ಖಂಡ (1)ರ, ಉಪ-ಖಂಡ (i)ರಲ್ಲಿ "ಒಂದು ಲಕ್ಷದ ಎಂಬತ್ತೆರಡು ಸಾವಿರದ ಇನ್ನೂರು ರೂಪಾಯಿಗಳು" ಎಂಬ ಪದಗಳು ಮತ್ತು ಅಂಕಿಗಳ ಬದಲಾಗಿ," ಎರಡು ಲಕ್ಷದ ಐದು ಸಾವಿರದ ಒಂದು ನೂರು ರೂಪಾಯಿಗಳು" ಎಂಬ ಪದಗಳನ್ನು ಪ್ರತ್ಯಾಯೋಜಿಸತಕ್ಕದ್ದು.

ಸಹಿ/-
(ವಜುಭಾಯಿ ವಾಲ)
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್. ಕೆ. ಶಾಂತರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ(ಸೇವೆಗಳು).

IndiaCode